www.ecourtsindia.com

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.**

# ಕ್ರಿಮಿನಲ್ ಮೊಕದ್ದಮೆ ಸಂಖ್ಯೆ 1333/2021

**ಫಿರ್ಯಾದಿ :** ರಾಜ್ಯದ ಪರವಾಗಿ ಲಿಂಗದಹಳ್ಳಿ ಪೊಲೀಸರು

- ವಿರುದ್ಧ -

**ಆರೋಪಿ/ತರುಃ**

1) ಗೌತಮ್ ಕೃಷ್ಣ ಬಿನ್ ಮಂಜುನಾಥ, 32 ವರ್ಷ,

2) ಮಂಜುನಾಥ ಬಿನ್ ಮುನಿಯಪ್ಪ, 50 ವರ್ಷ,

3) ಶುಭ ಕೋಂ ಗೌತಮ್ ಕೃಷ್ಣ, 31 ವರ್ಷ,

4) ಅರ್ಪಿತಾ ಕೋಂ ಮಂಜುನಾಥ, 28 ವರ್ಷ,

ಎಲ್ಲರೂ ವಾಸ : ಜಯಪುರ ತಣಿಗೆಬೈಲು ಗ್ರಾಮ, ಲಿಂಗದಹಳ್ಳಿ, ತರೀಕೆರೆ ತಾಲ್ಲೂಕು

**-ಃದೋಷಾರೋಪಣೆಃ-**

ಶ್ರೀ ಶಿವಕುಮಾರ್.ಆರ್., ಬಿ.ಎ.ಎಲ್., ಎಲ್.ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ ಆದ ನಾನು ಆರೋಪಿತರಾದ ನಿಮ್ಮ ವಿರುದ್ಧ ಮಾಡುವ ದೋಷಾರೋಪಣೆ ಏನೆಂದರೆಃ-

ದಿನಾಂಕ 24.12.2020 ರಂದು ಮಧ್ಯಾಹ್ನ 12.30 ಗಂಟೆ ಸಮಯದಲ್ಲಿ ಲಿಂಗದಹಳ್ಳಿ ಪೊಲೀಸ್ ಠಾಣಾ ಸರಹದ್ದಿನ ಜಯಪುರ ಗ್ರಾಮದಲ್ಲಿ ಗ್ಯಾಸ್ ಸಿಲಿಂಡರ್ ವಿಚಾರದಲ್ಲಿ ಆರೋಪಿತರಾದ ನೀವು ಸಮಾನ ಉದ್ದೇಶದಿಂದ 1 ನೇ ಆರೋಪಿಯಾದ ನೀವು ಚಾಸಾ-1 ಶಶಿಕಲಾ ಮತ್ತು ಚಾಸಾ-4 ವಿಜಯಕುಮಾರ ರವರಿಗೆ ಬೇವರ್ಸಿಗಳಾ ನಿಮಗೆ ಯಾವ ಗ್ಯಾಸ್ ಸಿಲಿಂಡರ್ ಕೊಡಬೇಕು ಎಂದು ಅವಾಚ್ಯ ಶಬ್ದಗಳಿಂದ ಬೈದು ಅವಮಾನ ಮಾಡಿದ್ದು, 2 ರಿಂದ 4 ನೇ ಆರೋಪಿತರಾದ ನೀವು ಚಾಸಾ-1 ಮತ್ತು 4 ರವರಿಗೆ ಹಲ್ಕಾ ನನ್ನ ಮಕ್ಕಳಾ ನಿಮಗೆ ಯಾವ ಸಿಲಿಂಡರ್ ಕೊಡಬೇಕು ಎಂದು ಅವಾಚ್ಯ ಶಬ್ದಗಳಿಂದ ಬೈದು ಅವಮಾನ ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಎರಡನೇಯದಾಗಿ ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಸಮಾನ ಉದ್ದೇಶದಿಂದ 1 ನೇ ಆರೋಪಿಯಾದ ನೀವು ಚಾಸಾ-1 ರವರ ಕೊರಳಪಟ್ಟಿ ಹಿಡಿದು ಎಳೆದಾಡಿ, 2 ನೇ ಆರೋಪಿಯಾದ ನೀವು ಚಾಸಾ-1

This is a True Copy of the Court Records Online. Authenticated @ districts.ecourtsindia.com/cnr/KACM710017822021/truecopy/order-1.pdf

ರವರಿಗೆ ಜೊರಾಗಿ ಕೆಳಗೆ ತಳ್ಳಿ ಕಳೆಗೆ ಬೀಳಿಸಿ ನೋವುಂಟು ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 323 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಮೂರನೇಯದಾಗಿ ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಸಮಾನ ಉದ್ದೇಶದಿಂದ, 1 ನೇ ಆರೋಪಿಯಾದ ನೀವು ಜಗಳ ಬಿಡಿಸಲು ಬಂದ ಚಾಸಾ-1 ರವರ ತಲೆ ಕೂದಲು ಹಿಡಿದು ಎಳೆದಾಡಿ ಅವರ ಮಾನಕ್ಕೆ ಧಕ್ಕೆಯನ್ನುಂಟು ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 354 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನಾಲ್ಕನೇಯದಾಗಿ ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಸಮಾನ ಉದ್ದೇಶದಿಂದ 1 ನೇ ಆರೋಪಿಯಾದ ನೀವು ಕೋಲಿನಿಂದ ಚಾಸಾ-1 ರವರ ಮೈಕೈಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯಗಳನ್ನುಂಟು ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 324 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಕೊನೆಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಸಮಾನ ಉದ್ದೇಶದಿಂದ ನಮ್ಮಗಳ ಸಹವಾಸಕ್ಕೆ ಬಂದರೆ ನಿಮ್ಮಗಳನ್ನು ಜೀವ ಸಹಿತ ಬಿಡುವುದಿಲ್ಲವೆಂದು ಜೀವ ಬೆದರಿಕೆ ಹಾಕಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 506 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನೀವು ಸದರಿ ಆರೋಪಗಳ ಮೇಲೆ ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗತಕ್ಕುದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕ : 23.05.2023

ಸಹಿ
**(ಶಿವಕುಮಾರ್.ಆರ್.)**
**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ.**

This is a True Copy of the Court Records Online. Authenticated @ districts.ecourtsindia.com/cnr/KACM710017822021/truecopy/order-1.pdf

www.ecourtsindia.com